**ಕರ್ನಾಟಕ ರಕ್ಷಣಾ ವೇದಿಕೆ**

# ಕಾವೇರಿ ನ್ಯಾಯಾಧಿಕರಣ: ಕನ್ನಡ,ಕನ್ನಡಿಗ, ಕರ್ನಾಟಕಕ್ಕೆ ಅನ್ಯಾಯ

**ಕಾವೇರಿ ನ್ಯಾಯಾಧಿಕರಣ ತೀರ್ಪಿನ ವಿರುದ್ಧ ಕರ್ನಾಟಕ ರಕ್ಷಣಾ ವೇದಿಕೆ ಕರೆ ನೀಡಿದ್ದ ಕರ್ನಾಟಕ ಬಂದ್: ಫೆಬ್ರವರಿ ೧೨**



**ಕರ್ನಾಟಕ ರಕ್ಷಣಾ ವೇದಿಕೆ**

**ಕಾವೇರಿ ನ್ಯಾಯಾಧಿಕರಣ ತೀರ್ಪು ಹೊರ ಬಂದ ತಕ್ಷಣಾ ಹೋರಾಟಕ್ಕಿಳಿದ ಕರ್ನಾಟಕ ರಕ್ಷಣಾ ವೇದಿಕೆ**



**ಕರ್ನಾಟಕ ರಕ್ಷಣಾ ವೇದಿಕೆ**

## ಅರಸೀಕೆರೆಯಲ್ಲಿ ತೀರ್ಪು ವಿರೋಧಿಸಿ ರೈಲು ತಡೆ

ಅರಸೀಕೆರೆ, ಫೆ.6-ಕಾವೇರಿ ನ್ಯಾಯ ಮಂಡಳಿ ತೀರ್ಪಿನಿಂದ ರಾಜ್ಯಕ್ಕೆ ತುಂಬಾ ಅನ್ಯಾಯವಾಗಿದೆ ಎಂದು ನಿನ್ನೆ ಸಂಜೆ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ಇಂಟರ್ ಸಿಟಿ ಎಕ್ಸ್‌ಪ್ರೆಸ್ ರೈಲನ್ನು 10 ನಿಮಿಷ ತಡೆದು ಪ್ರತಿಭಟನೆ ನಡೆಸಲಾಯಿತು.

ರಕ್ಷಣಾ ವೇದಿಕೆಯ ನೂರಾರು ಕಾರ್ಯಕರ್ತರು ತೀರ್ಪಿನ ವಿರುದ್ಧ ಘೋಷಣೆ ಕೂಗುತ್ತಾ ಪಟ್ಟಣದ ತುಂಬಾ ಸಂಚರಿಸಿ, ಬೆಂಗಳೂರು-ಹೊನ್ನಾವರ ರಾಷ್ಟ್ರೀಯ ಹೆದ್ದಾರಿ 206ರಲ್ಲಿ ಮುಕ್ಕಾಲು ಗಂಟೆ ರಸ್ತೆ ತಡೆ ಸಹ ನಡೆಸಿ ತೀವ್ರ ಪ್ರತಿಭಟನೆ ಕೈಗೊಂಡರು.

ಇಂಟರ್ ಸಿಟಿ ಎಕ್ಸ್‌ಪ್ರೆಸ್ ರೈಲು ಸಂಜೆ 5.15ಕ್ಕೆ ಬರಬೇಕಾಗಿದುದ್ದು ನಿನ್ನೆ ಸಂಜೆ 5.55ಕ್ಕೆ ಬಂದಿತು. ಅಲ್ಲೇ ಕಾದಿದ್ದ ರಕ್ಷಣಾ ವೇದಿಕೆ ಕಾರ್ಯಕರ್ತರು ರೈಲನ್ನು 6.50ರವರೆಗೂ ತಡೆದು ಪ್ರತಿಭಟಿಸಿದರು. ಇದೇ ಸಂದರ್ಭದಲ್ಲಿ ಇಲ್ಲಿ ಹಾಜರಿದ್ದ ಮಾಜಿ ಸಚಿವೆ ಬಿ.ಟಿ.ಲಲಿತಾನಾಯಕ್ ಪ್ರತಿಭಟನಾಕಾರರೊಂದಿಗೆ ಸೇರಿಕೊಂಡರು.

ನಂತರ ಮಾತನಾಡಿದ ಅವರು, ಕಾವೇರಿ ನ್ಯಾಯಾಧೀಕರಣದ ತೀರ್ಪಿನಿಂದ ರಾಜ್ಯದ ರೈತರಿಗೆ ಕುತ್ತಿಗೆಗೆ ಉರುಳು ಬಿದ್ದಂತಾಗಿದೆ ಎಂದರಲ್ಲದೆ, ಕೇಂದ್ರ ಸರ್ಕಾರಕ್ಕೆ ರಾಜ್ಯಕ್ಕೆ ಮಲತಾಯಿ ಧೋರಣೆ ತೋರುತ್ತಿರುವುದು ಮತ್ತೊಮ್ಮೆ ಸಾಬೀತಾಗಿದೆ ಎಂದರು.

ಬಂದ್ ಮತ್ತು ಪ್ರತಿಭಟನೆಗಳನ್ನು ಅಹಿಂಸಾತ್ಮಕವಾಗಿ ಕೈಗೊಳ್ಳಬೇಕೆಂದು ಮನವಿ ಮಾಡಿದ ಲಲಿತಾನಾಯಕ್ ರೈತರ ಬೆಂಬಲಕ್ಕೆ ನಿಲ್ಲುವುದಾಗಿ ಹೇಳಿದರು. ಕರ್ನಾಟಕ ರಕ್ಷಣಾ ವೇದಿಕೆ ಅಧ್ಯಕ್ಷ ಹೇಮಂತ್ ಕುಮಾರ್ ಮಾತನಾಡಿ, ಕಾವೇರಿ ನ್ಯಾಯಮಂಡಳಿಯ ಈ ತೀರ್ಪಿನಿಂದ ರಾಜ್ಯದ ಜನತೆಗೆ ತೀವ್ರ ನಿರಾಸೆ, ನೋವು ಉಂಟಾಗಿದೆ ಎಂದರು. ಅಲ್ಲದೆ ತೀರ್ಪು ಸಂಪೂರ್ಣವಾಗಿ ತಮಿಳುನಾಡಿನ ಪರವಾಗಿದೆ. ಇದರಲ್ಲಿ ನ್ಯಾಯಕ್ಕಿಂತ ರಾಜಕೀಯವೇ ಹೆಚ್ಚು ಕೆಲಸ ಮಾಡಿರುವುದು ಮೇಲ್ನೋಟದಲ್ಲಿ ಕಾಣಿಸುತ್ತಿದೆ ಎಂದರು.

ರಾಜ್ಯದ ರೈತರ ರಕ್ಷಣೆಗಾಗಿ ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಟಿ.ಎ.ನಾರಾಯಣಗೌಡರ ನೇತೃತ್ವದಲ್ಲಿ ಇನ್ನೂ ಉಗ್ರ ಹೋರಾಟ ಹಮ್ಮಿಕೊಳ್ಳುವುದು ಎಂದರು. ಕರವೇ ಗೌರವಾಧ್ಯಕ್ಷ ಬಾಣಾವರ ಲಕ್ಷ್ಮೀಶ್, ನಗರಾಧ್ಯಕ್ಷ ಕಿರಣ್‌ಗೌಡ ಈ ಸಂದರ್ಭದಲ್ಲಿ ರೈತಪರವಾಗಿ ಮಾತನಾಡಿದರು.

## ಬಾಗೇಪಲ್ಲಿಯಲ್ಲಿ ರಸ್ತೆ ತಡೆ

ಬಾಗೇಪಲ್ಲಿ, ಫೆ.7-ಕಾವೇರಿ ನ್ಯಾಯ ಮಂಡಳಿ ತೀರ್ಪನ್ನು ವಿರೋಧಿಸಿ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಿದರು.

ಇಲ್ಲಿನ ಎಚ್.ನರಸಿಂಹಯ್ಯ ವೃತ್ತದಿಂದ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ಬಂದ ಕಾರ್ಯಕರ್ತರು 1 ಗಂಟೆಗೂ ಹೆಚ್ಚು ಕಾಲ ವಾಹನಗಳನ್ನು ತಡೆದು ಪ್ರತಿಭಟನೆ ನಡೆಸಿದರು.

ತಾಲ್ಲೂಕು ರಕ್ಷಣಾ ವೇದಿಕೆ ಅಧ್ಯಕ್ಷ ಚಂದ್ರಶೇಖರ್ ಹಾಗೂ ಕಾರ್ಯದರ್ಶಿ ಬಿ.ಟಿ.ಸೀನ ಸೇರಿದಂತೆ ನೂರಾರು ಕಾರ್ಯಕರ್ತರು ಪ್ರತಿಭಟನೆಯಲ್ಲಿ ಪಾಲ್ಗೊಂಡರು.

ಶೀಘ್ರವಾಗಿ ಕೊಡಿಸುವ ಭರವಸೆ ನೀಡಿದರು. ತಹಶೀಲ್ದಾರ್ ವಿಪುಲ್ ಬನ್ಸಾಲ್ ಮತ್ತು ಗೌತಮ್ ಸ್ಥಳಕ್ಕೆ ಭೇಟಿ ನೀಡಿದ್ದರು.

## ಮಾಲೂರು ಬಂದ್ ಯಶಸ್ವಿ

ಮಾಲೂರು, ಫೆ. ೭- ಕಾವೇರಿ ನ್ಯಾಯ ಮಂಡಳಿ ನೀಡಿರುವ ತೀರ್ಪು ರಾಜ್ಯದ ಹಿತಕ್ಕೆ ಮಾರಕವಾಗಿದೆ ಎಂದು ಆರೋಪಿಸಿರುವ ಕರ್ನಾಟಕ ರಕ್ಷಣಾ ವೇದಿಕೆ ಮಂಗಳವಾರ "ಮಾಲೂರು ಬಂದ್"ಗೆ ಕರೆ ನೀಡಿದ್ದು ಬಂದ್ ಸಂಪೂರ್ಣವಾಗಿ ಯಶಸ್ವಿಯಾಗಿದೆ.

ಕ.ರ.ವೇ.ಯ ನೂರಾರು ಕಾರ್ಯಕರ್ತರು ಪಟ್ಟಣದ ಬಾಲಾಜಿ ವೃತ್ತದ ಬಳಿ ಜಮಾಯಿಸಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿ. ನ್ಯಾಯಾಧೀಕರಣದ ವಿರುದ್ಧ ಮತ್ತು ಕೇಂದ್ರ ಸರ್ಕಾರದ ಮಲತಾಯಿ ಧೋರಣೆಯ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ಪ್ರತಿಕೃತಿ ದಹಿಸಿದರು.

ಪ್ರತಿಭಟನಾಕಾರರನ್ನು ಉದ್ದೇಶಿಸಿ ಮಾತನಾಡಿದ ಕ.ರ.ವೇ. ತಾಲ್ಲೂಕು ಅಧ್ಯಕ್ಷ ಎಸ್. ಪ್ರಕಾಶ್, ಕಾವೇರಿ ಕಣಿವೆಯಲ್ಲಿ ಒಟ್ಟು 740 ಟಿ.ಎಂ.ಸಿ. ಎಫ್.ಟಿ. ನೀರಿನಲ್ಲಿ 419 ಟಿ.ಎಂ.ಸಿ. ಎಫ್.ಟಿ. ನೀರು ತಮಿಳುನಾಡಿಗೆ ಹಂಚಿಕೆ ಮಾಡಿರುವ ನ್ಯಾಯಾಧೀಕರಣದ ತೀರ್ಪಿನಿಂದ ರಾಜ್ಯಕ್ಕೆ ಅನ್ಯಾಯವಾಗಿದೆ.

ಪ್ರತಿ ವರ್ಷ 192 ಟಿ.ಎಂ.ಸಿ. ಎಫ್.ಟಿ. ನೀರನ್ನು ಕರ್ನಾಟಕ ಬಿಡಬೇಕೆಂದು ತೀರ್ಪಿನಲ್ಲಿ ತಿಳಿಸಿರುವುದು.

ರಾಜ್ಯಕ್ಕೆ ಹಾಗೂ ಪ್ರತಿಯೊಬ್ಬ ಕನ್ನಡಿಗನಿಗೂ ಅನ್ಯಾಯವಾಗಿದೆ. ಕಾವೇರಿ ನೀರಿನ ಹಂಚಿಕೆ ವಿವಾದ ಇತ್ಯರ್ಥಪಡಿಸಲು ರಚಿಸಲಾಗಿರುವ ನ್ಯಾಯ ಮಂಡಳಿಯು ತೀರ್ಪು ನೀಡಲು 16 ವರ್ಷ ತೆಗೆದುಕೊಂಡರೂ ಸಹ ನ್ಯಾಯ ಸಮ್ಮತ ತೀರ್ಪು ನೀಡಲು ಸಾಧ್ಯವಾಗದೆ ಇದೀಗ ಹೊರಬಿದ್ದಿರುವ ಅಂತಿಮ ನಿರ್ಧಾರದಂತೆ ಕರ್ನಾಟಕಕ್ಕೆ ಬಾರೀ ಆಘಾತವಾಗಿದೆ. ಇದನ್ನು ಸರಿಪಡಿಸದಿದ್ದಲ್ಲಿ ಕ.ರ.ವೇ. ಹಂತ-ಹಂತವಾಗಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು. ನೀರು ಹಂಚಿಕೆಯಲ್ಲಿ ನ್ಯಾಯಾಲಯ ಮೊರೆ ಹೋಗುವುದಕ್ಕಿಂತ ಎರಡು ರಾಜ್ಯಗಳ ರೈತರು ಮುಖಂಡರು, ಜನಪ್ರತಿನಿಧಿಗಳು, ಸೌಹಾರ್ದತೆಯಿಂದ ಒಪ್ಪಂದದ ಮೂಲಕ ನೀರಿನ ಸಮಸ್ಯೆಯನ್ನು ಬಗೆಹರಿಸಲು ಮುಂದಾಗಬೇಕೆಂದು ನುಡಿದರು.

ಬಂದ್ ವೇಳೆಯಲ್ಲಿ ಎಲ್ಲಾ ಅಂಗಡಿಮುಂಗಟ್ಟುಗಳು, ಸರ್ಕಾರಿ ಶಾಲಾ ಕಾಲೇಜುಗಳು ಮುಚ್ಚಿದ್ದವು. ಸಂಚಾರ ಅಸ್ತವ್ಯಸ್ತವಾಗಿ ಪ್ರಯಾಣಿಕರು ಪರದಾಡುವ ಸ್ಥಿತಿ ನಿರ್ಮಾಣವಾಗಿತ್ತು.

ಪ್ರತಿಭಟನೆಯಲ್ಲಿ ಕ.ರ.ವೇ. ನಗರ ಅಧ್ಯಕ್ಷ ಎನ್.ವಿ. ಮುರಳೀಧರ್, ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಹುಲಿದೆನ ಮಂಜು, ಮುಖಂಡರುಗಳಾದ ಎಸ್.ಎಂ. ರಾಜು, ಎ.ಎನ್. ದಯಾನಂದ್, ಚಂಚಿರಾಜೇಶ್, ಸೋಮಶೇಖರ್, ಇನ್ನಿತರರು ಭಾಗವಹಿಸಿದ್ದರು.

**ಕರ್ನಾಟಕ ರಕ್ಷಣಾ ವೇದಿಕೆ**

# ಮೈಸೂರಿನಲ್ಲಿ ತಾರಕಕ್ಕೇರಿದ ಕಾವೇರಿ ಕಾವು

## ನೂರಾರು ಸೆರೆ

ಮೈಸೂರು, ಫೆ.6– ಕಾವೇರಿ ನ್ಯಾಯಾಧೀಕರಣದ ತೀರ್ಪು ಪ್ರತಿಭಟಿಸಿ ಇಂದು ಮೈಸೂರಿನಲ್ಲಿ ಕರ್ನಾಟಕ ರಕ್ಷಣಾವೇದಿಕೆ ಕಾರ್ಯಕರ್ತರು ಹಾಗೂ ಎಲ್ಲ ಪಕ್ಷಗಳ ಮುಖಂಡರು ರಸ್ತೆ ತಡೆ ನಡೆಸಿ ಪ್ರತಿಭಟಿಸಿದರು. ಬೆಳಗ್ಗೆ ಕೆ.ಆರ್. ಸರ್ಕಲ್‌ಗೆ ಆಗಮಿಸಿದ ರಕ್ಷಣಾವೇದಿಕೆಯ ನೂರಾರು ಕಾರ್ಯಕರ್ತರು ಹಾಗೂ ಕಾಂಗ್ರೆಸ್, ಬಿಜೆಪಿ, ಸಮಾಜವಾದಿ ಪಕ್ಷ , ರೈತ ಹೋರಾಟ ಸಮಿತಿಯ ಸಾವಿರಾರು ಕಾರ್ಯಕರ್ತರು ರಸ್ತೆ ತಡೆ ನಡೆಸಿ ಭೂತದಹನ ನಡೆಸುವುದರ ಮೂಲಕ ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ಸದಾ ಜನಜಂಗುಳಿ ಹಾಗೂ ಬಸ್‌ನಿಂದ ಗಿಜುಗುಡುತ್ತಿದ್ದ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ , ಕೆ.ಆರ್. ಸರ್ಕಲ್ ಸೇರಿದಂತೆ ನಗರದ ಎಲ್ಲ ಪ್ರಮುಖ ನಿಲ್ದಾಣಗಳು ಸಾರ್ವಜನಿಕರಿಲ್ಲದೆ ಬಿಕೋ ಎನ್ನುತ್ತಿದ್ದವು. ಮುನ್ನೆಚ್ಚರಿಕೆ ಕ್ರಮವಾಗಿ ಶಾಲಾ ಕಾಲೇಜುಗಳಿಗೆ ರಜೆ ನೀಡಲಾಗಿತ್ತು. ಬೆಳಗ್ಗೆ ಸರ್ಕಾರಿ ಹಾಗೂ ಖಾಸಗಿ ಬಸ್‌ಗಳ ಸಂಚಾರ ಆರಂಭವಾಯಿತಾದರೂ ನಂತರ ಸಾರ್ವಜನಿಕರಿಂದ ತೀವ್ರ ಪ್ರತಿಭಟನೆ ವ್ಯಕ್ತವಾಗಿದ್ದರಿಂದ ಸಂಚಾರ ಸ್ಥಗಿತಗೊಂಡಿತು.

ಅಂಗಡಿ ಮಾಲೀಕರು ತಮ್ಮ ದೈನಂದಿನ ವ್ಯಾಪಾರ ವಹಿವಾಟನ್ನು ನಿಲ್ಲಿಸಿ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು. ರೈಲ್ವೆ ನಿಲ್ದಾಣದಲ್ಲಿ ಕೂಡ ಜನರಿಲ್ಲದೆ ಖಾಲಿ ಹೊಡೆಯುತ್ತಿತ್ತು. ಒಟ್ಟಿನಲ್ಲಿ ಮೈಸೂರು ನಗರ ಸಂಪೂರ್ಣವಾಗಿ ಕುದಿಯುತ್ತಿದ್ದು ಯಾವುದೇ ಕ್ಷಣದಲ್ಲಿ ಪರಿಸ್ಥಿತಿ ಭುಗಿಲೇಳುವ ಸಾಧ್ಯತೆ ಇದೆ.

**ಕ.ರ.ವೇ. ಕಾರ್ಯಕರ್ತರ ಬಂಧನ:**

ಕೆ.ಆರ್. ವೃತ್ತದಲ್ಲಿ ಅಂಗಡಿಗಳನ್ನು ಬಲವಂತವಾಗಿ ಮುಚ್ಚಿಸಲು ಯತ್ನಿಸಿದ ಕರ್ನಾಟಕ ರಕ್ಷಣಾ ವೇದಿಕೆಯ ನಗರಾಧ್ಯಕ್ಷ ಮೋಹನ್‌ಕುಮಾರ್ ಗೌಡ ಸೇರಿದಂತೆ ನೂರಾರು ಕಾರ್ಯಕರ್ತರನ್ನು ಪೊಲೀಸರು ಬಂಧಿಸಿದರು. ಕೆಲವು ಅಂಗಡಿಗಳು ಎಂದಿನಂತೆ ತಮ್ಮ ವ್ಯಾಪಾರ ವಹಿವಾಟವನ್ನು ಆರಂಭಿಸಿದ್ದರಿಂದ ರಕ್ಷಣಾ ವೇದಿಕೆ ಕಾರ್ಯಕರ್ತರು ಅಂಗಡಿಗಳನ್ನು ಬಲವಂತವಾಗಿ ಮುಚ್ಚಿಸಲು ಮುಂದಾದರು.

ಈ ವೇಳೆ ಅಂಗಡಿ ಮಾಲೀಕರಿಗೂ ಹಾಗೂ ಕಾರ್ಯಕರ್ತರ ನಡುವೆ ಮಾತಿನ ಚಕಮಕಿ ನಡೆದಿದ್ದರಿಂದ ಪೊಲೀಸರು ಬಂಧಿಸಿದರು. ಈ ಮಧ್ಯೆ ಬಿಜೆಪಿ, ಕಾವೇರಿ ಕಣಿವೆ ಎಲ್ಲ ಜಿಲ್ಲೆಗಳಲ್ಲಿ ರಸ್ತೆ ತಡೆ ನಡೆಸುವಂತೆ ಪಕ್ಷದ ಕಾರ್ಯಕರ್ತರಿಗೆ ಸೂಚಿಸಿದೆ.

ಕಾವೇರಿಯ ಕಾವು ಗಂಟೆ ಗಂಟೆಗೂ ಕಾವೇರುತ್ತಿದ್ದು , ರೈತರಿಂದ ಯಾವುದೇ ಸಂದರ್ಭದಲ್ಲಿಯೂ ಆಕ್ರೋಶ ಭುಗಿಲೇಳುವ ಸಾಧ್ಯತೆ ಇದೆ. ಈ ಮಧ್ಯೆ ಪೊಲೀಸರು ಮುನ್ನೆಚ್ಚರಿಕೆ ಕ್ರಮವಾಗಿ ನಗರದಾದ್ಯಂತ ಭಾರಿ ಬಂದೋಬಸ್ತ್ ಏರ್ಪಡಿಸಿದ್ದಾರೆ. ಬೆಳಗ್ಗೆ ಕೆಎಸ್‌ಆರ್‌ಪಿ, ಕ್ಷಿಪ್ರ ಕಾರ್ಯಾಚರಣೆ ಪಡೆ ಯೋಧರು ನಗರದಾದ್ಯಂತ ಪಥ ಸಂಚಲನ ನಡೆಸಿ ಸಾರ್ವಜನಿಕರು ಭಯ ಭೀತರಾಗಬೇಡಿ ಎಂದು ಧ್ವನಿವರ್ಧಕಗಳ ಮೂಲಕ ಮನವಿ ಮಾಡಿದರು.